ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**302(296)**
ಮಾನ್ಯ ಸದಸ್ಯರ ಹೆಸರು	ಶ್ರೀ ಸಿ ಎಂ ಇಬ್ರಾಹಿಂ(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	18.02.2022
ಉತ್ತರಿಸುವ ಸಚಿವರು	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರದಿಂದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಸ್ವಯಂ ಉದ್ಯೋಗ ಕೈಗೊಳ್ಳಲು ಯೋಜನೆಗೆ ಬಿಡುಗಡೆಯಾದ ಅನುದಾನವೆಷ್ಟು; ಬಳಕೆಯಾದ ಅನುದಾನವೆಷ್ಟು; ಕಳೆದ ಮೂರು ವರ್ಷಗಳಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವೀಕೃತವಾದ ಅರ್ಜಿಗಳೆಷ್ಟು; ಅದರಲ್ಲಿನ ಫಲಾನುಭವಿಗಳೆಷ್ಟು; (ವರ್ಷವಾರು ಮತ್ತು ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳ ಸಂಪೂರ್ಣ ಮಾಹಿತಿ ಒದಗಿಸುವುದು?	ಸರ್ಕಾರದಿಂದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಕಳೆದ ಮೂರು ವರ್ಷಗಳಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಯೋಜನೆಗೆ ಬಿಡುಗಡೆಯಾದ ಅನುದಾನ ರೂ.23856.74ಲಕ್ಷಗಳು, ಬಳಕೆಯಾದ ಅನುದಾನ ರೂ.23470.94ಲಕ್ಷಗಳು, ಕಳೆದ ಮೂರು ವರ್ಷಗಳಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವೀಕೃತ ಅರ್ಜಿಗಳ ಸಂಖ್ಯೆ:2,61,440 ಅದರಲ್ಲಿ ಫಲಾನುಭವಿಗಳ ಸಂಖ್ಯೆ-65,273. 2018-19 ಮತ್ತು 2019-20ನೇ ಸಾಲಿನಲ್ಲಿ ಒದಗಿಸಿದ ಅನುದಾನದಲ್ಲಿ ವಿಧಾನಸಭಾ ಕ್ಷೇತ್ರವಾರು ಸೌಲಭ್ಯ ಒದಗಿಸಲಾಗಿದೆ. ವರ್ಷವಾರು ಮತ್ತು ವಿಧಾನಸಭಾ ಕ್ಷೇತ್ರವಾರು ಅಂಕಿಅಂಶಗಳ ಸಂಪೂರ್ಣ ಮಾಹಿತಿ ನಿಗಮದ ಜಾಲತಾಣ http://dbcdc.karnataka.gov.in ರಲ್ಲಿ ನೀಡಲಾಗಿದೆ. 2020-21ನೇ ಸಾಲಿನ ಅಯವ್ಯಯ ಭಾಷಣದ ಘೋಷಣೆ ಅನುಷ್ಠಾನಕ್ಕೆ ನಿರುದ್ಯೋಗಿ ಯುವಕರಿಗೆ ಇ-ವಾಣಿಜ್ಯ ಸಂಸ್ಥೆಗಳ ಉತ್ಪನ್ನಗಳನ್ನು ತಲುಪಿಸಲು ಬೈಕ್ ಖರೀದಿ ಯೋಜನೆಯನ್ನು ಜಿಲ್ಲಾವಾರು ಅನುಷ್ಠಾನಗೊಳಿಸಲಾಗಿರುತ್ತದೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ**ದಲ್ಲಿ ನೀಡಲಾಗಿದೆ.

ಸಂಖ್ಯೆ: ಹಿಂವಕ 97 ಬಿಎಂಎಸ್ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು